ಕರ್ನಾಟಕ ಸರ್ಕಾರ

**ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ**

ಹಿರಿಯ ಸಹಾಯಕ ನಿರ್ದೇಶಕರ ಕಚೇರಿ, ಪತ್ರಿಕಾ ಭವನ, ವರ್ಕನಹಳ್ಳಿ ರಸ್ತೆ, ಶಂಕರ ರೈಸ್ ಮಿಲ್ ಎದುರುಗಡೆ ಯಾದಗಿರಿ–585202

ದೂರವಾಣಿ: 08473–253722 ಫ್ಯಾಕ್ಸ್: 08473–253722 ಇ–ಮೇಲ್: varthabhavanyadagiri@gmail.com

Facebook: varthabhavanyadagiri Blogger: yadagirivarthe


ದಿನಾಂಕ: 4ನೇ ಫೆಬ್ರುವರಿ 2017

# ಹೈದರಾಬಾದ್ –ಕರ್ನಾಟಕ ಭಾಗದ ಅಭಿವೃದ್ಧಿಗೆ ಹೆಚ್ಚಿನ ಹಣ ನೀಡಲು ಸರ್ಕಾರ ಬದ್ಧ

– ಮಾನ್ಯ ಮುಖ್ಯಮಂತ್ರಿ ಶ್ರೀ ಸಿದ್ದರಾಮಯ್ಯ




**ಯಾದಗಿರಿ: ಫೆ.4:** ಈ ಭಾಗದ 6 ಜಿಲ್ಲೆಗಳ ಅಭಿವೃದ್ಧಿಗೆ ಹೈದರಾಬಾದ್ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿ(ಹೆಚ್‌ಕೆಆರ್‌ಡಿಬಿ) ಎಷ್ಟು ಹಣ ಅಗತ್ಯವಿದೆಯೋ ಅಷ್ಟು ಹಣವನ್ನು ನೀಡಲು ಸರಕಾರ ಬದ್ಧವಾಗಿದೆ ಎಂದು ಸನ್ಮಾನ್ಯ ಮುಖ್ಯಮಂತ್ರಿ ಶ್ರೀ ಸಿದ್ದರಾಮಯ್ಯ ಅವರು ಘೋಷಿಸಿದರು.

ಯಾದಗಿರಿ ನಗರದ ಸರಕಾರಿ ಪದವಿ ಪೂರ್ವ ಕಾಲೇಜು ಮೈದಾನದಲ್ಲಿ ಆಯೋಜಿಸಿದ್ದ, ನೂತನ ಜಿಲ್ಲಾಡಳಿತ ಭವನ ಉದ್ಘಾಟನೆ ಸಮಾರಂಭದಲ್ಲಿ ಅವರು ಮಾತನಾಡಿದರು.

ಪ್ರತಿ ವರ್ಷ ಹೈದರಾಬಾದ್ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿಗೆ ಒಂದು ಸಾವಿರ ಕೋಟಿ ರೂಪಾಯಿ ನೀಡಲಾಗುತ್ತದೆ. ಈ ವರ್ಷ 1,500 ಕೋಟಿ ರೂಪಾಯಿ ನೀಡಲು ಸಂಸದರಾದ ಡಾ.ಮಲ್ಲಿಕಾರ್ಜುನ ಖರ್ಗೆ ಅವರು ಮನವಿ ಮಾಡಿದ್ದಾರೆ. ಆದರೆ, ಈಗಾಗಲೇ ಮಂಡಳಿ ಅಧ್ಯಕ್ಷರಾದ ಡಾ.ಶರಣಪ್ರಕಾಶ ಪಾಟೀಲ ಹಾಗೂ

ಕಾರ್ಯದರ್ಶಿಗಳಾದ ಆದಿತ್ಯ ಆಮ್ಲಾನ್ ಬಿಸ್ವಾಸ್ ಅವರಿಗೆ ಅಭಿವೃದ್ಧಿ ಕಾರ್ಯಗಳಿಗೆ ಖರ್ಚು ಮಾಡಿದಷ್ಟು ಹಣವನ್ನು ನೀಡುವುದಾಗಿ ತಿಳಿಸಿದ್ದೇನೆ ಎಂದರು.

ಸಂವಿಧಾನದ 371(ಜೆ) ಕಲಂ ತಿದ್ದುಪಡಿಗೆ ಸಂಸದ ಡಾ.ಮಲ್ಲಿಕಾರ್ಜುನ ಖರ್ಗೆ ಅವರು ಒತ್ತಡ ಹೇರುವ ಮೂಲಕ ಜಾರಿಗೆ ಸಾಕಷ್ಟು ಶ್ರಮವಹಿಸಿದ್ದಾರೆ. ರಾಜ್ಯ ಸರ್ಕಾರ 371(ಜೆ) ಕಲಂ ಜಾರಿ ಮಾಡಿ ಸಾಕಷ್ಟು ಅಭಿವೃದ್ಧಿಗೆ ಶ್ರಮಿಸುತ್ತಿದೆ ಎಂದು ಅವರು ಹೇಳಿದರು.
ಈ ಭಾಗದ 35 ಕೆರೆಗಳಿಗೆ ನೀರು ತುಂಬಲು ಅನುಕೂಲವಾಗುವ 623 ಕೋಟಿ ರೂಪಾಯಿ ವೆಚ್ಚದ ಸನ್ನತಿ ಏತ ನೀರಾವರಿ ಯೋಜನೆಗೆ 323 ಕೋಟಿ ಖರ್ಚಾಗಿದ್ದು, 2017-18ನೇ ಸಾಲಿನಲ್ಲಿ ಈ ನೀರಾವರಿ ಯೋಜನೆ ಪೂರ್ಣಗೊಳಿಸಲು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿರುವುದಾಗಿ ತಿಳಿಸಿದರು.

ನಾಬಾರ್ಡ್‌ನಿಂದಲೂ ಈ ಭಾಗದ ಕೆರೆಗಳಿಗೆ ನೀರು ತುಂಬಿಸುವ ಯೋಜನೆ ಹಂತ-ಹಂತವಾಗಿ ಜಾರಿಗೊಳಿಸಲು ಕ್ರಮಕೈಗೊಳ್ಳಲಾಗುವುದು ಎಂದು ಅವರು ಹೇಳಿದರು.

ಜಿಲ್ಲೆಗೆ ವೈದ್ಯಕೀಯ ಕಾಲೇಜು ಮತ್ತು ಸುಮಾರು 800 ನಿರುದ್ಯೋಗಿಗಳಿಗೆ ಉದ್ಯೋಗಕ್ಕೆ ಸಹಕಾರಿಯಾಗಲು ಕೌಶಲ್ಯ ತರಬೇತಿ ಕೇಂದ್ರ ಪ್ರಾರಂಭಿಸಲು ಕ್ರಮಕೈಗೊಳ್ಳಲಾಗುವುದು ಎಂದು ಅವರು ತಿಳಿಸಿದರು.

ಈ ಭಾಗದ ಕೊಲ್ಲೂರು ಮಲ್ಲಪ್ಪ ಅವರು ಗಾಂಧಿ ತತ್ವಗಳಡಿ ನಡೆದು, ಸಾಕಷ್ಟು ಸಾಮಾಜಿಕ ಸೇವಗೈದಿದ್ದಾರೆ. ಅವರ ಸ್ಮರಣೆಗಾಗಿ ಸ್ಮಾರಕ ನಿರ್ಮಿಸಬೇಕಿದೆ. ಈ ಬಜೆಟ್‌ನಲ್ಲಿ ಇದನ್ನು ಘೋಷಿಸುವುದಾಗಿ ಅವರು ಭರವಸೆ ನೀಡಿದರು.

ಚುನಾವಣೆ ಪ್ರಣಾಳಿಕೆಯಲ್ಲಿ ಕಾಂಗ್ರೆಸ್ ಪಕ್ಷ ನೀಡಿದ 165 ಭರವಸೆಗಳಲ್ಲಿ ಈಗಾಗಲೇ ರಾಜ್ಯ ಸರ್ಕಾರ 125 ಭರವಸೆಗಳನ್ನು ಈಡೇರಿಸಿದೆ. ಇನ್ನೂ ಎರಡು ಬಾರಿ ತಾವು ಬಜೆಟ್ ಮಂಡಿಸಲಿದ್ದು, ಎಲ್ಲಾ 165 ಬೇಡಿಕೆಗಳನ್ನು ಈಡೇರಿಸಿ ನುಡಿದಂತೆ ನಡೆದ ಸರ್ಕಾರ ಎಂಬ ಹೆಗ್ಗಳಿಕೆಗೆ ಪಾತ್ರವಾಗುತ್ತದೆ ಎಂದು ಅವರು ತಿಳಿಸಿದರು.

ರಾಜ್ಯದಲ್ಲಿ 24.01 ರಷ್ಟು ಪರಿಶಿಷ್ಟ ಜಾತಿ/ಪಂಗಡದ ಜನರಿದ್ದಾರೆ. ಒಟ್ಟು 83 ಸಾವಿರ ಕೋಟಿ ವೆಚ್ಚದಲ್ಲಿ ಪರಿಶಿಷ್ಟ ಜಾತಿ/ಪಂಗಡದ ಜನರ ಅಭಿವೃದ್ಧಿಗೆ 19,542 ಕೋಟಿ ರೂಪಾಯಿ ನೀಡಿರುವುದಾಗಿ ತಿಳಿಸಿದರು. 2017-

18ನೇ ಸಾಲಿನಲ್ಲಿ ಎಸ್‌ಸಿಪಿ/ಟಿಎಸ್‌ಪಿ ಯೋಜನೆಯಡಿ ಈ ವರ್ಗದವರಿಗೆ 22 ಸಾವಿರ ಕೋಟಿಯಷ್ಟು ಯೋಜನೆಯ ಗಾತ್ರ ಹೆಚ್ಚಲಿದೆ ಎಂದು ಅವರು ಹೇಳಿದರು.

ರಾಜ್ಯದಲ್ಲಿ ರೈತರಿಗೆ 3 ಲಕ್ಷ ರೂಪಾಯಿವರೆಗೆ ಬಡ್ಡಿ ರಹಿತ ಸಾಲವನ್ನು ನೀಡಲಾಗುತ್ತದೆ. 3ರಿಂದ 10 ಲಕ್ಷದವರೆಗಿನ ಸಾಲಕ್ಕೆ ಶೇ.3%ರಷ್ಟು ಬಡ್ಡಿಯಲ್ಲಿ ನೀಡಲಾಗುತ್ತಿದೆ ಎಂದು ತಿಳಿಸಿದರು.

ರಾಷ್ಟ್ರೀಕೃತ ಬ್ಯಾಂಕ್‌ಗಳಿಂದ ರೈತರು ಪಡೆದ 30ಸಾವಿರ ಕೋಟಿ ರೂಪಾಯಿ ಸಾಲ ಪಡೆದಿದ್ದಾರೆ. ರಾಜ್ಯ ಸರ್ಕಾರ ಸಹಕಾರ ಸಂಘಗಳಿಂದ ರೈತರು ಪಡೆದ 10 ಸಾವಿರ ಕೋಟಿ ಹಣದಲ್ಲಿ ಅರ್ಧದಷ್ಟು ಮನ್ನಾ ಮಾಡಲು ಸಿದ್ಧವಿದೆ. ಆದರೆ, ರಾಷ್ಟ್ರೀಕೃತ ಬ್ಯಾಂಕ್‌ಗಳಿಂದ ರೈತರು ಪಡೆದ 30 ಸಾವಿರ ಕೋಟಿ ರೂಪಾಯಿ ಸಾಲವನ್ನು ಮನ್ನಾ ಮಾಡಲು ಮುಂದೆ ಬರುತ್ತಿಲ್ಲ ಎಂದು ವಿಷಾದ ವ್ಯಕ್ತಪಡಿಸಿದರು.

ರಾಜ್ಯದಲ್ಲಿ ತುಂತುರು ನೀರಾವರಿಗೆ ಆದ್ಯತೆ ನೀಡಲಾಗುತ್ತಿದ್ದು, ತುಂತುರ ನೀರಾವರಿಗೆ ಶೇ.90ರಷ್ಟು ಸಬ್ಸಿಡಿ ನೀಡಲಾಗುತ್ತಿದೆ ಎಂದು ರೈತಪರ ಯೋಜನೆಗಳನ್ನು ವಿವರಿಸಿದರು.

ಕಾರ್ಯಕ್ರಮಕ್ಕೆ ವಿಶೇಷ ಆಹ್ವಾನಿತರಾಗಿ ಆಗಮಿಸಿದ್ದ ಸಂಸದ ಡಾ.ಮಲ್ಲಿಕಾರ್ಜುನ ಖರ್ಗೆ ಅವರು ಮಾತನಾಡಿ, ಈ ಭಾಗದ ರೈತರಿಗೆ ನೀರಾವರಿ ಸೌಲಭ್ಯಕ್ಕೆ ಬಿಜಾಪೂರದಿಂದ ಸೈದಾಪೂರದ ಕೊನೆಯವರೆಗೆ ಸುಮಾರು 22ರಷ್ಟು ಬ್ಯಾರೇಜ್‌ಗಳನ್ನು ನಿರ್ಮಾಣ ಮಾಡಲಾಗಿದೆ ಎಂದು ಅವರು ಹೇಳಿದರು. ಈ ಭಾಗದ ಜನರು ನೀರನ್ನು ಉಪಯೋಗಿಸಿಕೊಳ್ಳದೇ ತಮ್ಮ ಜಮೀನುಗಳನ್ನು ಬೇರೆ ವ್ಯಕ್ತಿಗಳಿಗೆ ಗುತ್ತಿಗೆ ನೀಡಿ, ಗುಳೆ ಹೋಗುತ್ತಿರುವುದಕ್ಕೆ ವಿಷಾದ ವ್ಯಕ್ತಪಡಿಸಿದರು.

ಈ ಸಂದರ್ಭದಲ್ಲಿ ಜಿಲ್ಲೆಗೆ ಬೇಕಿರುವ ಪ್ರಮುಖ 5 ಬೇಡಿಕೆಗಳನ್ನು ಮುಖ್ಯಮಂತ್ರಿಗಳ ಗಮನಕ್ಕೆ ತಂದು ಇವುಗಳನ್ನು ಈಡೇರಿಸುವಂತೆ ಖರ್ಗೆ ಅವರು ಮನವಿ ಮಾಡಿದರು.

ಮುಖ್ಯ ಅತಿಥಿಯಾಗಿ ಆಗಮಿಸಿದ್ದ ಕಂದಾಯ ಸಚಿವ ಕಾಗೋಡು ತಿಮ್ಮಪ್ಪ ಅವರು ಮಾತನಾಡಿ, ರಾಜ್ಯದಲ್ಲಿ ಯಾವುದೇ ಜಿಲ್ಲೆಯಲ್ಲಿ ಇಷ್ಟು ಸುಂದರವಾದ ಜಿಲ್ಲಾಡಳಿತ ಭವನವಿಲ್ಲ ಎಂದು ವರ್ಣಿಸಿದ ಅವರು ಅಧಿಕಾರಿಗಳು ಸ್ವಚ್ಛ- ಪಾರಾದರ್ಶಕವಾಗಿ ಆಡಳಿತ ನಡೆಸುವ ಮೂಲಕ ಜನರಿಗೆ ಅನುಕೂಲ ಮಾಡಬೇಕು ಎಂದು ಖಡಕ್ಕಾಗಿ ನುಡಿದರು.

ಇದೇ ಸಂದರ್ಭದಲ್ಲಿ ಮಾತನಾಡಿದ ಕರ್ನಾಟಕ ಗಡಿ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಶ್ರೀ ಬಾಬುರಾವ ಚಿಂಚನಸೂರ ಅವರು ಮಾತನಾಡಿ, ಸ್ವಕ್ಷೇತ್ರ ಗುರುಮಠಕಲ್‌ಗೆ ವಿವಿಧ ಯೋಜನೆಗಳು ಈಡೇರಿಸುವಂತೆ ಮುಖ್ಯಮಂತ್ರಿಗಳಿಗೆ ಮನವಿ ಮಾಡಿದರು.

ಯಾದಗಿರಿ ಶಾಸಕ ಡಾ.ಎ.ಬಿ ಮಾಲಕರೆಡ್ಡಿ ಕಾರ್ಯಕ್ರಮದ ಅಧ್ಯಕ್ಷತೆವಹಿಸಿ, ಪ್ರಾಸ್ತಾವಿಕವಾಗಿ ಮಾತನಾಡಿದರು. ಜಿಲ್ಲಾಧಿಕಾರಿಗಳಾದ ಶ್ರೀಮತಿ ಖುಷ್ಬೂ ಗೋಯಲ್ ಚೌಧರಿ ಅವರು ಸ್ವಾಗತಿಸಿದರು. ಜಿಲ್ಲಾ ಪಂಚಾಯತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಡಾ.ಅವಿನಾಶ್ ಮೆನನ್ ರಾಜೇಂದ್ರನ್ ಅವರು ವಂದಿಸಿದರು.

ಕಾರ್ಯಕ್ರಮದಲ್ಲಿ ವೈದ್ಯಕೀಯ ಸಚಿವರಾದ ಡಾ.ಶರಣಪ್ರಕಾಶ ಪಾಟೀಲ, ಯಾದಗಿರಿ ಜಿಲ್ಲಾ ಉಸ್ತುವಾರಿ ಸಚಿವರಾದ ಶ್ರೀ ಪ್ರಿಯಾಂಕ್ ಖರ್ಗೆ, ಜಿಲ್ಲಾ ಪಂಚಾಯತಿ ಅಧ್ಯಕ್ಷರಾದ ಶ್ರೀ ಬಸರೆಡ್ಡಿ ಗೌಡ ಮಾಲಿಪಾಟೀಲ ಅನಪೂರ, ಗೃಹ ಮಂಡಳಿ ಅಧ್ಯಕ್ಷರಾದ ಶ್ರೀ ಮಾಲಿಕಯ್ಯ ಗುತ್ತೇದಾರ್, ಸಂಸದೀಯ ಕಾರ್ಯದರ್ಶಿ ಡಾ.ಉಮೇಶ ಜಾಧವ್, ವಿಧಾನ ಪರಿಷತ್ ಸದಸ್ಯರಾದ ಶ್ರೀ ಶರಣಪ್ಪ ಮಟ್ಟೂರ, ಕಲಬುರಗಿ ಈಶಾನ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯ ಅಧ್ಯಕ್ಷರಾದ ಶ್ರೀ ಮಹಮ್ಮದ್ ಇಲಿಯಾಸ್ ಸೇಠ್ ಬಾಗಬಾನ್, ಕರ್ನಾಟಕ ರಾಜ್ಯ ಜೈವಿಕ ಇಂಧನ ಅಭಿವೃದ್ಧಿ ಮಂಡಳಿಯ ಅಧ್ಯಕ್ಷರಾದ ಪ್ರೊ. ಬಸವರಾಜ್ ರಾಮನಾಳ, ಕೃಷ್ಣ ಕಾಡಾ ಅಧ್ಯಕ್ಷರಾದ ಶ್ರೀ ಜಕ್ಕಪ್ಪ ಸುಭಾಸ ಯಡವೆ, ಕಲಬುರಗಿ ಕಾಡಾ ನೀರಾವರಿ ಯೋಜನೆಗಳ ವಲಯ ಅಧ್ಯಕ್ಷರಾದ ಶ್ರೀ ಮಾಂತಪ್ಪ ಸಂಗಾವಿ, ಶಾಸಕರಾದ ಶ್ರೀ ರಾಜಾ ವೆಂಕಟಪ್ಪ ನಾಯಕ, ಗುರುಪಾಟೀಲ ಶಿರವಾಳ, ಹೆಕೆಆರ್‌ಡಿಬಿ ಕಾರ್ಯದರ್ಶಿಗಳಾದ ಶ್ರೀ ಆದಿತ್ಯ ಆಮ್ಲಾನ್ ಬಿಸ್ವಾಸ್, ಜಿಲ್ಲಾ ಪಂಚಾಯತ್ ಉಪಾಧ್ಯಕ್ಷರಾದ ಶ್ರೀ ಚಂದ್ರಕಲಾ ಹೊಸಮನಿ, ನಗರಾಭಿವೃದ್ಧಿ ಪ್ರಾಧಿಕಾರ ಅಧ್ಯಕ್ಷರಾದ ಶ್ರೀ ರಾಮರೆಡ್ಡಿ ತಂಗಡಗಿ, ನಗರಸಭೆ ಅಧ್ಯಕ್ಷರಾದ ಶ್ರೀ ಶಶಿಧರ ರೆಡ್ಡಿ ಹೊಸಳ್ಳಿ, ಮಾಜಿ ವಿದಾನ ಪರಿಷತ್ ಸದಸ್ಯರಾದ ಅಲ್ಲಮಪ್ರಭು ಪಾಟೀಲ, ಚೆನ್ನಾರೆಡ್ಡಿ ತುನ್ನೂರ್, ಐಜಿಪಿ ಅಲೋಕ ಕುಮಾರ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಶ್ರೀ ಯಡಾ ಮಾರ್ಟಿನ್ ಮಾರ್ಬನ್ಯಾಂಗ್, ತಾಲೂಕು ಪಂಚಾಯತ್ ಅಧ್ಯಕ್ಷರಾದ ಶ್ರೀ ಭಾಷು ರಾಠೋಡ್ ಹಾಗೂ ಅನೇಕ ಗಣ್ಯರು ಹಾಜರಿದ್ದರು.

**20 ನೂತನ ಬಸ್‌ಗಳಿಗೆ ಮುಖ್ಯಮಂತ್ರಿಗಳಿಂದ ಚಾಲನೆ:–** ಇದಕ್ಕೂ ಮುನ್ನ ನೂತನ ಜಿಲ್ಲಾಡಳಿತ ಭವನದ ಆವರಣದಲ್ಲಿ ಈಶಾನ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯ 3.82 ಕೋಟಿ ವೆಚ್ಚದ 20 ಬಸ್‌ಗಳಿಗೆ ಹಸಿರು ನಿಶಾನೆ ತೋರಿಸುವ ಮೂಲಕ ಸನ್ಮಾನ್ಯ ಮುಖ್ಯಮಂತ್ರಿಗಳಾದ ಶ್ರೀ ಸಿದ್ದರಾಮಯ್ಯ ಅವರು ಚಾಲನೆ ನೀಡಿದರು.

# ಐಟಿ–ಬಿಟಿ ಕ್ಷೇತ್ರದಲ್ಲಿ ಕನ್ನಡಿಗರಿಗೆ ಉದ್ಯೋಗ :ಸಚಿವ ಸಂಪುಟದಲ್ಲಿ ಚರ್ಚಿಸಿ ಕ್ರಮ – ಮಾನ್ಯ ಮುಖ್ಯಮಂತ್ರಿ ಶ್ರೀ ಸಿದ್ದರಾಮಯ್ಯ

**ಯಾದಗಿರಿ: ಫೆ.4:** ಸರೋಜಿನಿ ಮಹಿಷಿ ವರದಿ ಜಾರಿ ನಿಟ್ಟಿನಲ್ಲಿ ಐಟಿ–ಬಿಟಿ ಕ್ಷೇತ್ರದಲ್ಲಿ ಎ ಮತ್ತು ಬಿ ಶ್ರೇಣಿಯ 90% ಹುದ್ದೆಗಳು ಮತ್ತು ಸಿ ಮತ್ತು ಡಿ ದರ್ಜೆಯ ಶೇ.100 ರಷ್ಟು ಹುದ್ದೆಗಳನ್ನು ಕನ್ನಡಿಗರಿಗೆ ಮೀಸಲಿಡಬೇಕು ಎಂದು ಕನ್ನಡ ಅಭಿವೃದ್ಧಿ ಪ್ರಾಧಿಕಾರ ಶಿಫಾರಸ್ಸು ಮಾಡಿದ್ದು, ಸಚಿವ ಸಂಪುಟದಲ್ಲಿ ಚರ್ಚೆ ನಡೆದ ಬಳಿಕ ತೀರ್ಮಾನ ಕೈಗೊಳ್ಳಲಾಗುವುದು ಎಂದು ಮಾನ್ಯ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ತಿಳಿಸಿದರು.

ಯಾದಗಿರಿಯಲ್ಲಿ ನೂತನ ಜಿಲ್ಲಾಡಳಿತ ಭವನ ಉದ್ಘಾಟಿಸಿದ ಬಳಿಕ ಮಾಧ್ಯಮಗೋಷ್ಠಿಯನ್ನುದ್ದೇಶಿಸಿ ಮಾತನಾಡಿ ಅವರು ಈ ವಿಷಯ ತಿಳಿಸಿದರು. ಮುಂಗಾರು ಮಳೆ ಅಭಾವದಿಂದ 139 ತಾಲೂಕುಗಳಲ್ಲಿ ಬರಗಾಲ ಪರಿಸ್ಥಿತಿ ಮತ್ತು ಹಿಂಗಾರಿನಲ್ಲಿ 160 ತಾಲೂಕುಗಳಲ್ಲಿ ಬರ ಪರಿಸ್ಥಿತಿ ನಿರ್ಮಾಣವಾಗಿದ್ದು, ಶೇ. 70% ರಷ್ಟು ಮಳೆ ಕೊರತೆಯಾಗಿದೆ. ಕಳೆದ 50 ವರ್ಷಗಳಲ್ಲೇ ಅತ್ಯಂತ ಕಡಿಮೆ ಮಳೆಯಾಗಿದೆ ಎಂದು ಅವರು ವಿವರಿಸಿದರು.

ಕರ್ನಾಟಕ ಸರ್ಕಾರ ನೀರಾವರಿಗಾಗಿ ಸಾಕಷ್ಟು ಪ್ರೋತ್ಸಾಹ ನೀಡುತ್ತಿದೆ. ಪ್ರತಿವರ್ಷ ಕನಿಷ್ಟ 10 ಸಾವಿರ ಕೋಟಿ ರೂಪಾಯಿಗಳನ್ನು ನೀರಾವರಿಗಾಗಿ ಖರ್ಚು ಮಾಡುತ್ತಿದೆ ಎಂದು ಹೇಳಿದರು. ತಮ್ಮ ನೇತೃತ್ವದ 3 ವರ್ಷಗಳ ಆಡಳಿತಾವಧಿಯಲ್ಲಿ ನೀರಾವರಿಗೆ 40ಸಾವಿರ ಕೋಟಿ ರೂಪಾಯಿ ಖರ್ಚು ಮಾಡಿರುವುದಾಗಿ ಮಾಹಿತಿ ನೀಡಿದರು. ಸರ್ಕಾರದ 5 ವರ್ಷದ ಅವಧಿ ಮುಗಿಸುವವರೆಗೆ 60ಸಾವಿರ ಕೋಟಿ ರೂಪಾಯಿ ನೀರಾವರಿಗೆ ಖರ್ಚು ಮಾಡುವ ಗುರಿ ಹೊಂದಲಾಗಿದೆ ಎಂದು ಅವರು ತಿಳಿಸಿದರು.

ಮಾಧ್ಯಮಗೋಷ್ಠಿಯಲ್ಲಿ ಕಂದಾಯ ಸಚಿವರಾದ ಶ್ರೀ ಕಾಗೋಡು ತಿಮ್ಮಪ್ಪ, ಕಲಬುರಗಿ ಲೋಕಸಭಾ ಸದಸ್ಯರಾದ ಡಾ.ಮಲ್ಲಿಕಾರ್ಜುನ ಖರ್ಗೆ, ವೈದ್ಯಕೀಯ ಸಚಿವರಾದ ಡಾ.ಶರಣಪ್ರಕಾಶ ಪಾಟೀಲ, ಯಾದಗಿರಿ ಜಿಲ್ಲಾ ಉಸ್ತುವಾರಿ ಸಚಿವರಾದ ಶ್ರೀ ಪ್ರಿಯಾಂಕ್ ಖರ್ಗೆ, ಕರ್ನಾಟಕ ಗಡಿ ಪ್ರದೇಶ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಶ್ರೀ ಬಾಬುರಾವ ಚಿಂಚನಸೂರ, ಗೃಹ ಮಂಡಳಿ ಅಧ್ಯಕ್ಷರಾದ ಶ್ರೀ ಮಾಲಿಕಯ್ಯ ಗುತ್ತೇದಾರ್, ಶಾಸಕ ಡಾ. ಎ.ಬಿ.ಮಾಲಕರೆಡ್ಡಿ. ಸಂಸದೀಯ ಕಾರ್ಯದರ್ಶಿ ಡಾ.ಉಮೇಶ ಜಾಧವ್, ಶಾಸಕ ಗುರುಪಾಟೀಲ ಶಿರವಾಳ, ಹೆಕೆಆರ್‌ಡಿಬಿ ಕಾರ್ಯದರ್ಶಿಗಳಾದ ಶ್ರೀ ಆದಿತ್ಯ ಆಮ್ಲಾನ್ ಬಿಸ್ವಾಸ್, ಜಿಲ್ಲಾ ಪಂಚಾಯತಿ ಅಧ್ಯಕ್ಷರಾದ ಶ್ರೀ ಬಸರೆಡ್ಡಿ ಗೌಡ ಮಾಲಿಪಾಟೀಲ ಅನಪೂರ, ಜಿಲ್ಲಾಧಿಕಾರಿಗಳಾದ ಶ್ರೀಮತಿ ಖುಷ್ಬೂ ಗೋಯಲ್ ಚೌಧರಿ, ಜಿಲ್ಲಾ

ಪಂಚಾಯತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಡಾ.ಅವಿನಾಶ್ ಮೆನನ್ ರಾಜೇಂದ್ರನ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಯಡಾ ಮಾರ್ಟಿನ್ ಮಾರ್ಬನ್ಯಾಂಗ್ ಮುಂತಾದವರು ಇದ್ದರು.

------------